ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ. ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ:ಸಿ4(6) ಶೈ ಮತ್ತು ರಜೆ.ಅ ನಿಗದಿ-35/2020-21 ದಿನಾಂಕ:20.04.2021

: ಸುತ್ತೋಲೆ :

ವಿಷಯ: 2020-21ನೇ ಸಾಲಿಗೆ 1 ರಿಂದ 9ನೇ ತರಗತಿ ಮೌಲ್ಯಾಂಕನ ವಿಶ್ಲೇಷಣೆ ಹಾಗೂ ಶೈಕ್ಷಣಿಕ ಅವಧಿ ನಿಗದಿಪಡಿಸಿದ ಕುರಿತು.

ಉಲ್ಲೇಖ:
1. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಡಿ.ಎಸ್.ಇ.ಆರ್.ಟಿ/ಇವಿಜಿ/ಏ.ಪ.ಕು/72/2018-19 ದಿನಾಂಕ: 18.01.2021
2. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಸಿ4(6)ಸಪ್ರೌಶಾ/ಕಾ.ಪ್ರ-47/2020-21 ದಿನಾಂಕ: 19.02.2021.
3. ದಿನಾಂಕ:30/03/2021ರಂದು ಮಾನ್ಯ ಶಿಕ್ಷಣ ಸಚಿವರ ಅಧ್ಯಕ್ಷತೆಯ ಇಲಾಖಾ ಹಿರಿಯ ಅಧಿಕಾರಿಗಳ ಸಭೆಯಲ್ಲಿ ನೀಡಿದ ಸೂಚನೆಗಳಂತೆ.
4. ಈ ಕಛೇರಿ ಸುತ್ತೋಲೆ ಸಂಖ್ಯೆ:ಸಿ7(2)ಪ್ರಾಶಿಅ:ಶುಲ್ಕ:30/2020-21. ದಿನಾಂಕ: 19-02-2021.
5. ಶಿಕ್ಷಣ ಹಕ್ಕು ಕಾಯ್ದೆ, 2009 ಹಾಗೂ ಶಿಕ್ಷಣ ಹಕ್ಕು ನಿಯಮಗಳು 2012.
6. ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಸುತ್ತೋಲೆ ಸಂಖ್ಯೆ: ಆಕು 90 ಎಸಿಎಸ್ 2021 ದಿನಾಂಕ: 02-04-2021.
7. ಮಾನ್ಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ, ಇಲಾಖೆಯ ಹಿರಿಯ ಅಧಿಕಾರಿಗಳ, ರಾಜ್ಯ / ಜಿಲ್ಲಾ ಮಟ್ಟದಿಂದ ಸರ್ಕಾರಿ/ಖಾಸಗಿ ಶಾಲಾ ಸಂಘಗಳ ಪಧಾಧಿಕಾರಿಗಳು, ಶಿಕ್ಷಕರು, ಪೋಷಕ ಸಂಘದವರು ಹಾಗೂ ಶಿಕ್ಷಣ ತಜ್ಞರೊಂದಿಗೆ ದಿನಾಂಕ: 05-04-2021ರಂದು ನಡೆದ ಸಭಾ ನಡವಳಿಯಂತೆ.
8. ಮಾನ್ಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 15.04.2021 ರಂದು ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಡಿ.ಎಸ್.ಇ.ಆರ್.ಟಿ ಕಛೇರಿ, ಬೆಂಗಳೂರು ಇಲ್ಲಿ ನಡೆದ ಸಭೆಯಲ್ಲಿ ಚರ್ಚಿಸಿದಂತೆ.
9. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಇವರು ದಿನಾಂಕ: 20.04.2021ರಂದು ಏಕಕಡತದಲ್ಲಿ ಅನುಮೋದಿಸಿರುವಂತೆ.

*****

ಪ್ರಸ್ತುತ ಕೋವಿಡ್-19 ಸಾಂಕ್ರಾಮಿಕ ರೋಗ ಹರಡುತ್ತಿರುವ ಹಿನ್ನೆಲೆಯಲ್ಲಿ 2020-21ನೇ ಶೈಕ್ಷಣಿಕ ಸಾಲಿನಲ್ಲಿ ಶಾಲೆಗಳಲ್ಲಿ ಶೈಕ್ಷಣಿಕ ಪ್ರಕ್ರಿಯೆ ಪ್ರತಿವರ್ಷದಂತೆ ನಿರ್ವಹಿಸಲು ಸಾಧ್ಯವಾಗಿರುವುದಿಲ್ಲ. ಇಂಥಹ ಕಠಿಣ ಸನ್ನಿವೇಶದಲ್ಲಿಯೂ ಕೂಡ ಮಕ್ಕಳು ಬೋಧನಾ-ಕಲಿಕಾ ಪ್ರಕ್ರಿಯೆಯಿಂದ ವಂಚಿತರಾಗಬಾರದೆಂದು 'ವಿದ್ಯಾಗಮ' ಕಾರ್ಯಕ್ರಮ, ದೂರದರ್ಶನದ ಚಂದನ ವಾಹಿನಿಯಲ್ಲಿ (ಸಂವೇದ ಕಾರ್ಯಕ್ರಮ) ಪಾಠಪ್ರಸಾರ, ರೇಡಿಯೋ ಪಾಠ ಪ್ರಸಾರ ಮಾಡಲಾಗಿದೆ. ಹಲವಾರು ಶಾಲೆಗಳಲ್ಲಿ ಆನ್-ಲೈನ್ ವಿಧಾನದಲ್ಲಿ ತರಗತಿಗಳನ್ನು ನಡೆಸುವ/ಮಕ್ಕಳನ್ನು ತಲುಪುವ ಪ್ರಯತ್ನ ಮಾಡಲಾಗಿದೆ. ಆದರೆ ಪ್ರಸಕ್ತ ಸಾಲಿನಲ್ಲಿ ಶಾಲೆಗಳಲ್ಲಿ ನಿರ್ವಹಿಸಿದ ಕೆಲವು ಬೋಧನಾ ಕಲಿಕೆ ಪ್ರಕ್ರಿಯೆಯ ಪ್ರಯತ್ನಗಳಿಗೆ ಮೌಲ್ಯಮಾಪನ ನಿರ್ವಹಿಸಿ ವಿಶ್ಲೇಷಿಸಿ ಮುಕ್ತಾಯಗೊಳಿಸಬೇಕೆಂದಿರುವ ಸಂದರ್ಭದಲ್ಲಿ ಪುನಃ ಕೋವಿಡ್-19 ಸೋಂಕು ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಉಲ್ಲೇಖ(6)ರಂತೆ ಪ್ರಸ್ತುತ ನಡೆಯುತ್ತಿದ್ದ ವಿದ್ಯಾಗಮ/ಶಾಲೆಗಳಲ್ಲಿ ನಡೆಯುತ್ತಿರುವ 6-9 ತರಗತಿಗಳನ್ನು ದಿ:20-04-2021 ರವರೆಗೆ ಸ್ಥಗಿತಗೊಳಿಸಲಾಗಿದೆ. ಈ ಕುರಿತು ವಿವಿಧ ಸರ್ಕಾರಿ/ಖಾಸಗಿ ಶಾಲಾ ಸಂಘಟನೆಗಳು,

ಆಡಳಿತ ಮಂಡಳಿಗಳು, ಶಿಕ್ಷಕರ, ಪೋಷಕರ ಸಂಘಟನೆಗಳು ಅಭಿಪ್ರಾಯಿಸಿ ಸಂಕಲನಾತ್ಮಕ ಮೌಲ್ಯಮಾಪನ ಮತ್ತು ವಿಶ್ಲೇಷಣೆಗೆ ಅವಕಾಶ ನೀಡುವಂತೆ ಮನವಿ ಮಾಡಿದ ಹಿನ್ನಲೆಯಲ್ಲಿ ಉಲ್ಲೇಖ (7) ರಂತೆ ಸಭೆ ಕರೆದು ಚರ್ಚಿಸಲಾಗಿ ಬಹುತೇಕ ಸಂಘಟನೆಗಳವರು ಹಾಗೂ ತಜ್ಞರು ವಿದ್ಯಾರ್ಥಿಗಳ ಕಲಿಕೆಯ ಮಟ್ಟವನ್ನು ತಿಳಿದುಕೊಳ್ಳಲು ಮೌಲ್ಯಾಂಕನ ಮಾಡಿ, ಅದರ ಮೂಲಕ ಅವರು ಸಾಧಿಸಿದ ಕಲಿಕಾ ಫಲಗಳನ್ನು ಹಾಗೂ ಸಾಧಿಸದೇ ಇರುವ ಕಲಿಕಾಂಶಗಳನ್ನು ಪತ್ತೆಹಚ್ಚಬೇಕು, ಆ ನಂತರ ಸಾಧಿಸದೇ ಇರುವ ಕಲಿಕಾಂಶಗಳ ಕೊರತೆಯನ್ನು ನೀಗಿಸಲು 'ಸೇತು ಬಂಧ' ಕಾರ್ಯಕ್ರಮದಂತಹ ವಿಶೇಷ ಪ್ರಯತ್ನಗಳನ್ನು ಹಮ್ಮಿಕೊಳ್ಳಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿರುತ್ತಾರೆ.

ಸಭೆಯಲ್ಲಿ ಭಾಗವಹಿಸಿದ ಕೆಲವರು ಸಿ.ಬಿ.ಎಸ್.ಇ./ಐ.ಸಿ.ಎಸ್.ಇ ಮಂಡಳಿಗಳ ಪರೀಕ್ಷೆಗಳನ್ನು ಪೂರ್ಣಗೊಳಿಸಲಾಗಿದೆ ಹಾಗು ರಾಜ್ಯ ಪಠ್ಯಕ್ರಮದ ಕೆಲವು ಶಾಲೆಗಳಲ್ಲಿ ಈಗಾಗಲೇ ಸಂಕಲನಾತ್ಮಕ ಮೌಲ್ಯಾಂಕನವನ್ನು ಪೂರ್ಣಗೊಳಿಸಲಾಗಿದೆ ಹಾಗೂ ಪೂರ್ಣಗೊಳ್ಳುವ ಹಂತದಲ್ಲಿದೆ ಎಂದು ತಿಳಿಸಿದರು.

**ಸಭೆಯಲ್ಲಿ ಹಾಜರಿದ್ದ ಶಿಕ್ಷಣ ತಜ್ಞರು ಮಕ್ಕಳ 'ಶಿಕ್ಷಣ ಹಕ್ಕು ಕಾಯ್ದೆ-2009' ಹಾಗೂ ನಿಯಮಗಳಡಿ ಇರುವ ಈ ಕೆಳಗಿನ ಪ್ರಮುಖ ಅಂಶಗಳನ್ನು ಗಮನಕ್ಕೆ ತಂದಿರುತ್ತಾರೆ:**

- ಪರೀಕ್ಷೆಗಿಂತ ಕಲಿಕೆ ಮುಖ್ಯವಾಗಿದ್ದು ಪರೀಕ್ಷೆಯ ಮೂಲ ಉದ್ದೇಶವೇ ಕಲಿಕೆಯಲ್ಲಿನ ತೊಡಕುಗಳನ್ನು ಗುರುತಿಸಿ ಕಲಿಕೆಯನ್ನು ಮತ್ತಷ್ಟು ಉತ್ತಮಗೊಳಿಸುವುದು ಮತ್ತು ಎಲ್ಲಾ ಮಕ್ಕಳು ನಿಗದಿತ ಕಲಿಕಾ ಮಟ್ಟವನ್ನು ಸಾಧಸಬೇಕಾಗಿರುವುದರಿಂದ ಇಲಾಖೆ ವಿಶೇಷವಾಗಿ ಸೇತುಬಂಧ ಹಾಗು ವೇಗವರ್ಧಿತ ಕಲಿಕಾ ಕಾರ್ಯಕ್ರಮದ ಮೂಲಕ ಮುಂದಿನ ಶೈಕ್ಷಣಿಕ ವರ್ಷ (2021-22) ಪ್ರಾರಂಭವಾಗುವ ಮುನ್ನ ಎಲ್ಲಾ ಮಕ್ಕಳು ತರಗತಿವಾರು ವಿಷಯವಾರು ನಿಗದಿತ ಕಲಿಕೆಯನ್ನು ಪೂರ್ಣಗೊಳಿಸುವ ವಿಷಯಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು.
- ಮಕ್ಕಳ ಕಲಿಕೆ: ಭಯ, ಆಘಾತ ಹಾಗೂ ಆತಂಕ ರಹಿತ ಕಲಿಕಾ ವ್ಯವಸ್ಥೆ: ಜ್ಞಾನದ ಗ್ರಹಿಕೆ ಹಾಗೂ ಅನ್ವಯಿಸುವ ಸಾಮರ್ಥವನ್ನು ಅಳೆಯಲು ನಿರಂತರ ಹಾಗೂ ವ್ಯಾಪಕ ಮೌಲ್ಯಮಾಪನದ ವಿಧಿ ವಿಧಾನಗಳ ಬಗ್ಗೆ ಶಿಕ್ಷಣ ಹಕ್ಕು ಕಾಯಿದೆ ಹಾಗೂ ನಿಯಮಗಳಲ್ಲಿ ಸ್ಪಷ್ಟತೆ ಇದ್ದು ಅದನ್ನು ಕಡ್ಡಾಯವಾಗಿ ಪಾಲಿಸಬೇಕಾಗಿರುವುದರಿಂದ ಸರ್ಕಾರದ ಉದ್ದೇಶಿತ ತೀರ್ಮಾನ ಕಾನೂನಿನ ಚೌಕಟ್ಟಿನಲ್ಲಿರಬೇಕು.
- ಆದರೆ ಪ್ರಸಕ್ತ ಸಾಲಿನಲ್ಲಿ ಸೀಮಿತ ಶೈಕ್ಷಣಿಕ ಚಟುವಟಿಕೆಗಳಿಗೆ ಅವಕಾಶ ಲಭ್ಯವಾಗಿರುವುದರಿಂದ ಪರೀಕ್ಷೆ ನಡೆಸಲೇಬೇಕೆಂದಾದರೆ ನಿರಂತರ ಮೌಲ್ಯಮಾಪನದ ಅನ್ವಯ ಸಂಕಲನಾತ್ಮಕ ಮೌಲ್ಯಾಂಕನ ಮಾಡಬಹುದು ಎಂದು ಸಲಹೆ ನೀಡಿರುತ್ತಾರೆ.

ತದನಂತರ ಕೋವಿಡ್-19 ಸೊಂಕು ಉಲ್ಬಣಗೊಂಡ ಹಿನ್ನಲೆಯಲ್ಲಿ ಉಲ್ಲೇಖ (8) ರಂತೆ ಸಭೆ ಕರೆದು ಚರ್ಚಿಸಲಾಗಿ ಪ್ರಸ್ತುತ ಸನ್ನಿವೇಶದಲ್ಲಿ ಮಕ್ಕಳನ್ನು ಶಾಲೆಗೆ ಕರೆಯಿಸಿ ಮೌಲ್ಯಾಂಕನಕ್ಕೆ ಒಳಪಡಿಸುವುದು ಸೂಕ್ತವಲ್ಲ, ಹಾಗೂ ಈಗಾಗಲೆ ಹಲವು ರಾಜ್ಯಗಳು ಹಾಗೂ ಕೇಂದ್ರ ಪಠ್ಯ ಕ್ರಮದ ಪರೀಕ್ಷೆಗಳು ರದ್ದಾದ ಹಿನ್ನಲೆಯಲ್ಲಿ ರಾಜ್ಯ ಪಠ್ಯಕ್ರಮದ 1 ರಿಂದ 9ನೇ ತರಗತಿಗಳಿಗೆ ಈವರೆಗೆ ಶಾಲಾ ಹಂತದಲ್ಲಿ ನಿರ್ವಹಿಸಿರುವ ಪಠ್ಯವಸ್ತು ಮತ್ತು ಸಿ.ಸಿ.ಇ ಅಡಿಯಲ್ಲಿ ನಡಸಿರುವ ರೂಪಣಾತ್ಮಕ ಮೌಲ್ಯಮಾಪನಗಳ ವಿಶ್ಲೇಷಣೆ ಮಾಡಿ ಫಲಿತಾಂಶ ಪ್ರಕಟಿಸಿ ಪ್ರಸ್ತುತ ಸಾಲಿನ ಶೈಕ್ಷಣಿಕ ಚಟುವಟಿಕೆಗಳನ್ನು ಪೂರ್ಣಗೊಳಿಸಬಹುದು ಎಂದು ಅಭಿಪ್ರಾಯಿಸಲಾಗಿದೆ.

ಮುಂದುವರೆದು ಉಲ್ಲೇಖ (9)ರಲ್ಲಿ ಏಕ ಕಡತದಲ್ಲಿ ಅನುಮೋದಿಸಿದಂತೆ ಪ್ರಸ್ತುತ 2020-21ನೇ ಸಾಲಿನ 1 ರಿಂದ 9ನೇ ತರಗತಿಯ ಮಕ್ಕಳ ಕಲಿಕಾ ಪ್ರಗತಿಯ ಮೌಲ್ಯಾಂಕನ ವಿಶ್ಲೇಷಣೆ ಹಾಗೂ ಫಲಿತಾಂಶ ಪ್ರಕಟಣೆಯ ನಿರ್ವಹಣೆಯ ಕುರಿತು ಈ ಮುಂದಿನ ಮಾರ್ಗಸೂಚಿ ನೀಡಿದೆ.

**1 ರಿಂದ 9ನೇ ತರಗತಿ ಮೌಲ್ಯಾಂಕನ ವಿಶ್ಲೇಷಣೆ ಮತ್ತು ಫಲಿತಾಂಶ ಪ್ರಕಟಣೆಯ ಮಾರ್ಗಸೂಚಿ**

**1. 1 ರಿಂದ 5 ನೇ ತರಗತಿಗಳಿಗೆ :-**

ಪ್ರಸ್ತುತ ವರ್ಷ ಕೋವಿಡ್-19ರ ಹಿನ್ನೆಲೆಯಲ್ಲಿ 1 ರಿಂದ 5ನೇ ತರಗತಿಗಳಿಗೆ 04/08/2020 ರಿಂದ 10/10/2020ರವರೆಗೆ ಈಗಾಗಲೇ ವಿದ್ಯಾಗಮ ಕಾರ್ಯಕ್ರಮ ನಡೆಸಲಾಗಿದೆ. ತದನಂತರ ಕಾರಣಾಂತರದಿಂದ ಇದನ್ನು ಸ್ಥಗಿತಗೊಳಿಸಲಾಗಿತ್ತು. ಆನಂತರ ಸದರಿ ಮಕ್ಕಳಿಗೆ ಭೌತಿಕವಾಗಿ ಶಾಲೆಗಳಿಗೆ ಹಾಜರಾಗಲು ಅವಕಾಶ ಕಲ್ಪಿಸಿರುವುದಿಲ್ಲ. ಆದರೆ ಆನ್‌ಲೈನ್ ಶಿಕ್ಷಣ ನೀಡಲು ಅವಕಾಶ ಕಲ್ಪಿಸಲಾಗಿದೆ ಹಾಗೂ 5 ರಿಂದ 10ನೇ ತರಗತಿಯವರೆಗೆ ದೂರದರ್ಶನದ ಚಂದನ ವಾಹಿನಿಯಲ್ಲಿ "ಸಂವೇದ" ಇ-ಕಲಿಕಾ ಕಾರ್ಯಕ್ರಮದ ಮೂಲಕ ಪಾಠಗಳನ್ನು ಪ್ರಸಾರ ಮಾಡಲಾಗಿದೆ. 1 ರಿಂದ 4ನೇ ತರಗತಿವರೆಗೆ 11/01/2021ರಿಂದ "ಕಲಿಯುತ್ತಾ ನಲಿಯೋಣ" ರೇಡಿಯೋ ಕಾರ್ಯಕ್ರಮ ಪ್ರಸಾರ ಮಾಡಲಾಗಿದೆ.

ಪ್ರಸ್ತುತ ಹಂತದಲ್ಲಿಯೂ ಕೂಡ 1 ರಿಂದ 5ನೇ ತರಗತಿ ವಿದ್ಯಾರ್ಥಿಗಳು ಶಾಲೆಗಳಿಗೆ ಭೌತಿಕವಾಗಿ ಹಾಜರಾಗಲು ಕೋವಿಡ್-19ರ ತಾಂತ್ರಿಕ ಸಲಹಾ ಸಮಿತಿಯ ಅಭಿಪ್ರಾಯದಂತೆ ಅವಕಾಶ ನೀಡಿರುವುದಿಲ್ಲ. ಆದ್ದರಿಂದ ಸದರಿ ವಿದ್ಯಾರ್ಥಿಗಳ ಮೌಲ್ಯಾಂಕನ ನಡೆಸುವ ಸಲುವಾಗಿ ಈ ಕೆಳಗಿನ ಮಾರ್ಗಸೂಚಿಗಳನ್ನು ನೀಡಲಾಗಿದೆ:

- 1 ರಿಂದ 5ನೇ ತರಗತಿಗಳ ವಿದ್ಯಾರ್ಥಿಗಳಿಗೆ ವಿದ್ಯಾಗಮ ಕಾರ್ಯಕ್ರಮದಲ್ಲಿ ನಿರ್ವಹಿಸಿದ ದಾಖಲೆಗಳು/ಸಂವಹನದ ಆಧಾರದ ಮೇಲೆ ಕೆಲವು ಶಾಲೆಯವರು ಆನ್‌ಲೈನ್‌ನ ಮೂಲಕ ತರಗತಿ ನಿರ್ವಹಿಸಿದ್ದಲ್ಲಿ ಆ ಸಂದರ್ಭದಲ್ಲಿ ಅವಲೋಕಿಸಿದ ವಿದ್ಯಾರ್ಥಿಗಳ ಕಲಿಕಾ ಪ್ರಗತಿ, ಮಕ್ಕಳಿಗೆ ನೀಡಿದ್ದ ಪ್ರಬಂಧ, ಮುಂತಾದ ಚಟುವಟಿಕೆಗಳನ್ನಾಧರಿಸಿದ ಕೃತಿ ಸಂಪುಟ (ಚೈಲ್ಡ್ ಪ್ರೊಫೈಲ್), ಇತರೆ ಲಭ್ಯ ದಾಖಲೆಗಳನ್ನು ಅವಲೋಕಿಸಿ ಈವರೆಗೆ ಪೂರೈಸಿದ ಪಠ್ಯವಸ್ತು/ಸಾಮರ್ಥ್ಯ/ಕಲಿಕಾ-ಫಲಗಳ ಸಾಧನೆ ಮತ್ತು ಕೊರತೆಗಳನ್ನು ಶಾಲಾ ಹಂತದಲ್ಲಿ ಸಿಸಿಇ ನಿಯಮಗಳಂತೆ ವಿಶ್ಲೇಷಿಸಿ ಪ್ರಗತಿ ಪತ್ರದಲ್ಲಿ ದಾಖಲಿಸಿ ಎಲ್ಲಾ ವಿದ್ಯಾರ್ಥಿಗಳಿಗೆ ಮುಂದಿನ ತರಗತಿಗೆ ಬಡ್ತಿ ನೀಡುವುದು.
- ಈ ಪ್ರಕ್ರಿಯೆಯನ್ನು ಶಾಲಾ ಹಂತದಲ್ಲಿ 30 ಏಪ್ರಿಲ್ 2021 ರೊಳಗೆ ನಿರ್ವಹಿಸಿ ಫಲಿತಾಂಶ ದಾಖಲಿಸಿ ಪೂರ್ಣಗೊಳಿಸುವುದು.
- **1 ರಿಂದ 5ನೇ ತರಗತಿ ವಿದ್ಯಾರ್ಥಿಗಳಿಗೆ ಈ ಮೇಲೆ ತಿಳಿಸಿದಂತೆ ಈವರೆವಿಗೂ ಪೂರೈಸಿದ ಚಟುವಟಿಕೆಗಳನ್ನು ಆಧರಿಸಿ ಮಾತ್ರ ಮೌಲ್ಯಾಂಕನ ಮಾಡಲು ತಿಳಿಸಿರುವುದರಿಂದ ಈ ಮಕ್ಕಳಿಗೆ ಪ್ರತ್ಯೇಕ ಆನ್‌ಲೈನ್ / ಆಫ್‌ಲೈನ್ ಮೂಲಕ ಮೌಲ್ಯಾಂಕನ ಮಾಡಬಾರದು ಹಾಗೂ ಈ ತರಗತಿಗಳ ಮಕ್ಕಳಿಗೆ ಶಾಲೆಗೆ ಭೌತಿಕವಾಗಿ ಇದುವರೆವಿಗೂ ಹಾಜರಾಗಲು ಕೋವಿಡ್-19ರ ತಾಂತ್ರಿಕ ಸಲಹಾ ಸಮಿತಿಯು ಅವಕಾಶ ನೀಡದೇ ಇರುವುದರಿಂದ ಈ ಮಕ್ಕಳನ್ನು ಮೌಲ್ಯಾಂಕನಕ್ಕಾಗಿ ಶಾಲೆಗಳಿಗೆ ಹಾಜರಾಗಲು ತಿಳಿಸಬಾರದು.**

**2. 6 ರಿಂದ 9 ನೇ ತರಗತಿಗಳಿಗೆ :-**

- ಪ್ರಸ್ತುತ ವರ್ಷ ಕೋವಿಡ್-19ರ ಹಿನ್ನೆಲೆಯಲ್ಲಿ ಮಕ್ಕಳ ಬೋಧನೆ-ಕಲಿಕಾ ಪ್ರಕ್ರಿಯೆಯಿಂದ ವಂಚಿತರಾಗಬಾರದೆಂದು 6 ರಿಂದ 9ನೇ ತರಗತಿವರೆಗೆ 04/08/2020 ರಿಂದ 10/10/2020ರವರೆಗೆ ಈಗಾಗಲೇ ವಿದ್ಯಾಗಮ ಕಾರ್ಯಕ್ರಮ ನಡೆಸಲಾಗಿದೆ. 6 ರಿಂದ 9ನೇ ತರಗತಿಯವರೆಗೆ ದೂರದರ್ಶನದ



02

ಚಂದನ ವಾಹಿನಿಯಲ್ಲಿ "ಸಂವೇದ", ಇ-ಕಲಿಕಾ, ಆನ್‌ಲೈನ್ ಕಾರ್ಯಕ್ರಮದ ಮೂಲಕ ಪಾಠಗಳನ್ನು ಪ್ರಸಾರ ಮಾಡಲಾಗಿರುತ್ತದೆ. ತದನಂತರ 29/01/2021ರ ಸುತ್ತೋಲೆ ಪ್ರಕಾರ 01/02/2021 ರಿಂದ ರಾಜ್ಯದಲ್ಲಿನ ಸರ್ಕಾರಿ/ಅನುದಾನಿತ/ಅನುದಾನರಹಿತ 9 ಮತ್ತು 10ನೇ ತರಗತಿಗಳಿಗೆ ಶಾಲೆಗಳನ್ನು ಪೂರ್ಣ ಪ್ರಮಾಣದಲ್ಲಿ ನಡೆಸಲಾಗಿದೆ ಹಾಗೂ 6 ರಿಂದ 8ನೇ ತರಗತಿವರೆಗೆ ವಿದ್ಯಾಗಮ ಕಾರ್ಯಕ್ರಮವನ್ನು ಮುಂದುವರೆಸಲಾಗಿತ್ತು. ಮುಂದುವರೆದಂತೆ ದಿನಾಂಕ:19/02/2021ರ ಸುತ್ತೋಲೆ ಪ್ರಕಾರ ದಿ:22/02/2021ರಿಂದ ಬೆಂಗಳೂರು ನಗರದ ಬಿಬಿಎಂಪಿ ವ್ಯಾಪ್ತಿ ಹಾಗೂ ಕೇರಳ ರಾಜ್ಯದ ಗಡಿಗೆ ಹೊಂದಿಕೊಂಡಿರುವ ಪ್ರದೇಶಗಳಲ್ಲಿ 6 ಮತ್ತು 7ನೇ ತರಗತಿಗಳಿಗೆ ವಿದ್ಯಾಗಮ ಕಾರ್ಯಕ್ರಮವನ್ನು ಮುಂದುವರೆಸಲಾಗಿದೆ. ಉಳಿದಂತೆ ರಾಜ್ಯದ ಎಲ್ಲಾ ಶಾಲೆಗಳಲ್ಲಿ 6 ರಿಂದ 9ನೇ ತರಗತಿಗಳನ್ನು ಭೌತಿಕವಾಗಿ ಪ್ರತಿ ದಿನ ಪೂರ್ಣಾವಧಿ ತರಗತಿಗಳನ್ನು ನಡೆಸಲಾಗಿದೆ ಹಾಗೂ ರಾಜ್ಯದಾದ್ಯಂತ ಆನ್‌ಲೈನ್ ತರಗತಿಗಳನ್ನು ನಡೆಸಲು ಸಹ ಅವಕಾಶ ಕಲ್ಪಿಸಿಕೊಡಲಾಗಿರುತ್ತದೆ.

ಈ ಮೇಲಿನ ಅಂಶಗಳ ಹಿನ್ನೆಲೆಯಲ್ಲಿ 6 ರಿಂದ 9ನೇ ತರಗತಿಗಳ ಮೌಲ್ಯಾಂಕನ ವಿಶ್ಲೇಷಣೆ ಹಾಗೂ ಫಲಿತಾಂಶ ಪ್ರಕಟಣೆಯನ್ನು ಈ ಕೆಳಗಿನಂತೆ ನಿರ್ವಹಿಸಲು ತಿಳಿಸಿದೆ.

- ಪ್ರಸ್ತುತ ಸಾಲಿನಲ್ಲಿ 6 ರಿಂದ 9ನೇ ತರಗತಿಗಳ ವಿದ್ಯಾರ್ಥಿಗಳಿಗೆ ನಿರ್ವಹಿಸಿದ ವಿದ್ಯಾಗಮ ಕಾರ್ಯಕ್ರಮದಲ್ಲಿನ ದಾಖಲೆಗಳು/ಸಂವಹನದ ಅಧಾರದ ಮೇಲೆ, ನಂತರದ ಭೌತಿಕ ಹಾಗೂ ಆನ್‌ಲೈನ್ ಶಿಕ್ಷಣದ ಮೂಲಕ ತರಗತಿ ನಿರ್ವಹಿಸಿದ ಸಂದರ್ಭದಲ್ಲಿ ಅವಲೋಕಿಸಿದ ವಿದ್ಯಾರ್ಥಿಗಳ ಕಲಿಕಾ ಪ್ರಗತಿ, ಮಕ್ಕಳಿಗೆ ನೀಡಿದ ಕಲಿಕಾ ಪೂರಕ ಚಟುವಟಿಕೆಗಳು, ಪ್ರಾಜೆಕ್ಟ್ ಚಟುವಟಿಕೆ ಮುಂತಾದವುಗಳನ್ನು ಆಧರಿಸಿ ಸಂಗ್ರಹಿಸಿದ ದಾಖಲೆಗಳ ಕೃತಿಸಂಪುಟ (ಚೈಲ್ಡ್ ಪ್ರೊಫೈಲ್) ಗಳ ಮೇಲೆ ನಿರ್ವಹಿಸಿದ ಮೌಲ್ಯಾಂಕನ ಹಾಗೂ ಭೌತಿಕವಾಗಿ ನಿರ್ವಹಿಸಿದ/ಆನ್‌ಲೈನ್ ಭೋದನಾ ಕಲಿಕಾ ಪ್ರಕ್ರಿಯೆಲ್ಲಿ ಈಗಾಗಲೇ ಕೈಗೊಂಡಿರುವ ರೂಪಣಾತ್ಮಕ ಮೌಲ್ಯಮಾಪನ ಹಾಗೂ ಸಂಕಲನಾತ್ಮಕ ಮೌಲ್ಯಮಾಪನವನ್ನು ನಿರ್ವಹಿಸಿದಲ್ಲಿ ಅವುಗಳ ದಾಖಲೆಗಳನ್ನಾಧರಿಸಿ ಪಡೆದ ಅಂಕಗಳನ್ನು 100ಕ್ಕೆ ವೃದ್ಧಿಸಿ ಶ್ರೇಣಿ ನಮೂದಿಸುವುದು.
- ಒಟ್ಟಾರೇ ಈವರೆವಿಗೂ ಪೂರೈಸಿದ ಪಠ್ಯವಸ್ತು/ಕಲಿಕಾ ಸಾಮರ್ಥ್ಯಗಳ/ಕಲಿಕಾ ಫಲಗಳ ಸಾಧನೆ ಮತ್ತು ಕೊರತೆಗಳನ್ನು ಶಾಲಾ ಹಂತದಲ್ಲಿ ಸಿ.ಸಿ.ಇ ನಿಯಮದಂತೆ ವಿಶ್ಲೇಷಿಸಿ ವಿದ್ಯಾರ್ಥಿಗಳನ್ನು ಮುಂದಿನ ತರಗತಿಗಳಿಗೆ ಬಡ್ತಿ ನೀಡುವುದು ಹಾಗೂ ಪ್ರಗತಿ ಪತ್ರದಲ್ಲಿ ದಾಖಲಿಸುವುದು.
- **6 ರಿಂದ 9ನೇ ತರಗತಿ ವಿದ್ಯಾರ್ಥಿಗಳಿಗೆ ಈ ಮೇಲೆ ತಿಳಿಸಿದಂತೆ ಈವರೆವಿಗೂ ಪೂರೈಸಿದ ಚಟುವಟಿಕೆಗಳನ್ನು ಆಧರಿಸಿ ಮಾತ್ರ ಮೌಲ್ಯಾಂಕನ ಮಾಡಲು ತಿಳಿಸಿರುವುದರಿಂದ ಈ ಮಕ್ಕಳಿಗೆ ಪ್ರತ್ಯೇಕ ಆನ್‌ಲೈನ್ / ಆಫ್‌ಲೈನ್ ಮೂಲಕ ಮೌಲ್ಯಾಂಕನ ಮಾಡಬಾರದು.**
- ಈ ಪ್ರಕ್ರಿಯೆಯನ್ನು ಶಾಲಾ ಹಂತದಲ್ಲಿ 30 ಏಪ್ರಿಲ್ 2021 ರೊಳಗೆ ನಿರ್ವಹಿಸಿ ಫಲಿತಾಂಶ ದಾಖಲಿಸಿ ಪೂರ್ಣಗೊಳಿಸುವುದು.

**ಮೌಲ್ಯಾಂಕನದ ವಿಶ್ಲೇಷಣೆಯ ಅನುಪಾಲನೆ**

ಸದರಿ 1 ರಿಂದ 9ನೇ ತರಗತಿಯ ಮೌಲ್ಯಾಂಕನದ ಉದ್ದೇಶ ವಿದ್ಯಾರ್ಥಿಗಳನ್ನು ಉತ್ತೀರ್ಣ/ಅನುತ್ತೀರ್ಣ ಎಂದು ತೀರ್ಮಾನಿಸುವುದಲ್ಲ, ಬದಲಾಗಿ ಅವರ ಕಲಿಕೆಯ ಪ್ರಗತಿ ಹಾಗೂ ಕೊರತೆಯನ್ನು ತಿಳಿದು ಮುಂದಿನ ಶೈಕ್ಷಣಿಕ ವರ್ಷದ ಆರಂಭದಲ್ಲಿ ಸೇತು-ಬಂಧ ಕಾರ್ಯಕ್ರಮವನ್ನು ನಡೆಸಿ ಈ ಕೊರತೆಯನ್ನು ತುಂಬಲು ಕ್ರಮವಹಿಸಲು ಶಾಲಾವಾರು ಯೋಜನೆಯನ್ನು ತಯಾರಿಸಲು ತಿಳಿಸಿದೆ.

2021-22ನೇ ಶೈಕ್ಷಣಿಕ ಸಾಲಿನಲ್ಲಿ ಶಾಲೆಗಳು ಪುನರಾರಂಭವಾದ ನಂತರ ಈ ಮಕ್ಕಳಿಗೆ ಕಳೆದ ಸಾಲಿನಲ್ಲಿ ಹಿಂದಿನ ತರಗತಿಯಲ್ಲಿನ ಕಲಿಕಾ ಸಾಮರ್ಥ್ಯಗಳ ಬಗ್ಗೆ ನೈದಾನಿಕ ಪರೀಕ್ಷೆ ನಡೆಸಿ ಅವರಲ್ಲಿ ಇರುವ ಕಲಿಕಾ ಕೊರತೆಯನ್ನು ಗುರುತಿಸುವುದು. ಈ ಕೊರತೆಗಳು ಹಾಗೂ ಹಿಂದಿನ ವರ್ಷ ಪಟ್ಟಿ ಮಾಡಿ ಇಟ್ಟುಕೊಂಡಿದ್ದ ಕಲಿಕಾ ಕೊರತೆಗಳನ್ನಾಧರಿಸಿ ಪ್ರತಿ ಮಗುವಿನವಾರು ನಿರ್ದಿಷ್ಠ ತಂತ್ರಗಳನ್ನು ರೂಪಿಸಿ ಸೇತುಬಂಧ ಕಾರ್ಯಕ್ರಮ ಮುಖೇನ ಪರಿಹಾರ ಬೋಧನೆ ನಡೆಸುವುದು. ನಂತರ ಸಾಫಲ್ಯ ಪರೀಕ್ಷೆ ನಡೆಸಿ ಮಕ್ಕಳಲ್ಲಿ ಕಲಿಕೆ ಆಗಿರುವುದನ್ನು ದೃಢೀಕರಿಸಿ ಮುಂದಿನ ತರಗತಿಯ ಪಠ್ಯಾಧಾರಿತ ಕಲಿಕಾಂಶಗಳ ಬೋಧನೆಯನ್ನು ಆರಂಭಿಸುವುದು.

**2020-21ನೇ ಸಾಲಿನ ಬೇಸಿಗೆ ರಜೆ ಹಾಗೂ 2021-22ನೇ ಸಾಲಿನ ಶೈಕ್ಷಣಿಕ ವರ್ಷಾರಂಭ ಕುರಿತ (ತಾತ್ಕಾಲಿಕ) ವೇಳಾ ಪಟ್ಟಿ**

**(ಅ) ಪ್ರಾಥಮಿಕ ಶಾಲೆಗಳಿಗೆ**

- **1 ರಿಂದ 7/8 ನೇ ತರಗತಿಗಳು ಇರುವ ಪ್ರಾಥಮಿಕ ಶಾಲೆಗಳಿಗೆ 01.05.2021 ರಿಂದ 14.06.2021 ರವರೆಗೆ ಬೇಸಿಗೆ ರಜೆ.**
- **15.06.2021 ರಿಂದ 2021-22ನೇ ಸಾಲಿನ ಶೈಕ್ಷಣಿಕ ವರ್ಷ ಪ್ರಾರಂಭ.**

**(ಆ) ಪ್ರೌಢ ಶಾಲೆಗಳಿಗೆ**

- **ಪ್ರೌಢ ಶಾಲೆಗಳಲ್ಲಿನ 8 ಹಾಗೂ 9ನೇ ತರಗತಿಗಳಲ್ಲಿನ ವಿದ್ಯಾರ್ಥಿಗಳಿಗೆ 01.05.2021 ರಿಂದ 14.07.2021 ರವರೆಗೆ ಬೇಸಿಗೆ ರಜೆ.**
- **ಪ್ರೌಢ ಶಾಲೆಗಳಲ್ಲಿನ ಶಿಕ್ಷಕರುಗಳಿಗೆ 15.06.2021 ರಿಂದ 14.07.2021 ರವರೆಗೆ ಬೇಸಿಗೆ ರಜೆ.**
- **21.06.2021 ರಿಂದ 05.07.2021ರವರೆಗೆ ಎಸ್.ಎಸ್.ಎಲ್.ಸಿ ಪರೀಕ್ಷೆಗಳು ನಡೆಯುತ್ತದೆ.**
- **15.07.2021 ರಿಂದ 2021-22ನೇ ಸಾಲಿನ ಶೈಕ್ಷಣಿಕ ವರ್ಷ ಪ್ರಾರಂಭ**

ಮೇಲ್ಕಂಡ ವೇಳಾ ಪಟ್ಟಿಯು ತಾತ್ಕಾಲಿಕವಾಗಿದ್ದು, ಕೋವಿಡ್ 19 ಹಿನ್ನೆಲೆಯಲ್ಲಿ ಕಾಲಕಾಲಕ್ಕೆ ಸರ್ಕಾರ, ಇಲಾಖೆ ಮತ್ತು ಜಿಲ್ಲಾಡಳಿತಗಳು ನೀಡುವ ಸೂಚನೆಯನ್ನು ಮತ್ತು ನಿರ್ದೇಶನಗಳನ್ನು ಪಾಲಿಸುವುದು ಕಡ್ಡಾಯವಾಗಿರುತ್ತದೆ.

ಮೇಲಿನ ಮೌಲ್ಯಾಂಕನ ವಿಶ್ಲೇಷನೆ ಮಾರ್ಗಸೂಚಿ ಕರ್ನಾಟಕ ರಾಜ್ಯ ಪಠ್ಯಕ್ರಮ ಅನುಸರಿಸುವ ಶಾಲೆಗಳಿಗೆ ಮಾತ್ರ ಅನ್ವಯಿಸುತ್ತದೆ. ಉಳಿದಂತೆ ಇತರೆ ಪಠ್ಯಕ್ರಮದ ಶಾಲೆಗಳು ಆಯಾ ಸಕ್ಷಮಪ್ರಾಧಿಕಾರಿಗಳು ಸೂಚನೆ ನೀಡಿದಂತೆ ಕ್ರಮವಹಿಸುವುದು.

**(ಮಾನ್ಯ ಆಯುಕ್ತರ ಆದೇಶದ ಮೇರೆಗೆ)**

20/4/2021

**ನಿರ್ದೇಶಕರು (ಪ್ರೌಢ ಶಿಕ್ಷಣ)**
**ಸಾರ್ವಜನಿಕ ಶಿಕ್ಷಣ ಇಲಾಖೆ,**
**ಬೆಂಗಳೂರು.**

**ಇವರಿಗೆ:-**

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ ಮತ್ತು ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಉಪನಿರ್ದೇಶಕರು (ಆಡಳಿತ ಮತ್ತು ಅಭಿವೃದ್ಧಿ) ರವರ ಮೂಲಕ ಮುಂದಿನ ಕ್ರಮಕ್ಕಾಗಿ,

**ಪ್ರತಿಯನ್ನು ಗೌರವಗಳೊಂದಿಗೆ:-**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
4. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು ಎಸ್.ಎಸ್.ಎ/ಆರ್.ಎಂ.ಎಸ್.ಎ ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
5. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
6. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ರವರಿಗೆ ಮಾಹಿತಿಗಾಗಿ
7. ಆಯುಕ್ತರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
8. ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ಬೆಂಗಳೂರು ರವರಿಗೆ ಮಾಹಿತಿಗಾಗಿ
9. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
10. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
11. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
12. ಆಯುಕ್ತರು, ಸಾರಿಗೆ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ
13. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ
14. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
15. ಸಹ ನಿರ್ದೇಶಕರು ಮಧ್ಯಾಹ್ನ ಉಪಹಾರ ಯೋಜನೆ ಬೆಂಗಳೂರು ರವರಿಗೆ. ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ
16. ಕಛೇರಿ ಪ್ರತಿ